ಹಿರಿಯ ಸಿವಿಲ್ ನ್ಯಾಯಾಧೀಶರ ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ,

ತಿ. ನರಸೀಪುರ.

<u>ಸಿ ಸಿ ಸಂಖ್ಯೆ: 201/2021</u>

**<u>ದೋಷಾರೋಪಣೆ</u>**

ಶ್ರೀ ಹನುಮಂತ ಜಿ.ಹೆಚ್. ಬಿ.ಎ.ಎಲ್., ಎಲ್‌ಎಲ್.ಎಮ್., ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ, ತಿ ನರಸೀಪುರ ಆದ ನಾನು

ನವೀನ ಉಃ ಚಿಕ್ಕಣ್ಣ ಬಿನ್ ಅಮ್ಯಾಸೆ ಮಾದಯ್ಯ
27 ವರ್ಷ, ವಾಸಃ ಹಳೇ ಕೆಂಪಯ್ಯನಹುಂಡಿ,
ತಿ ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ.

ಎಂಬ ಆರೋಪಿತರಾದ ನಿಮ್ಮ ಮೇಲೆ ಈ ಕೆಳಗಿನಂತೆ ಹೊರಿಸುವ ದೋಷಾರೋಪವೇನೆಂದರೆ :-

ಮೊದಲನೆಯದಾಗಿ, ಆರೋಪಿತರಾದ ನೀವು ಚಾಸಾ-1/ಶ್ರೀಮತಿ ಎಂ ಮಮತಾ ರವರನ್ನು ಮದುವೆಯಾಗಿದ್ದು, ದಿಃ 27.10.2020 ರಂದು ರಾತ್ರಿ 10.00 ಗಂಟೆ ಸಮಯದಲ್ಲಿ ತಿ ನರಸೀಪುರ ಪೋಲಿಸ್ ಠಾಣಾ ವ್ಯಾಪ್ತಿಯ, ತಿ. ನರಸೀಪುರ ತಾಲ್ಲೂಕಿನ ಕೆಂಪಯ್ಯನಹುಂಡಿ ಗ್ರಾಮದ ನಿಮ್ಮ ಮನೆಯಲ್ಲಿ ನೀವು ಚಾಸಾ-1 ರವರ ಮೇಲೆ ಅನುಮಾನ ಪಟ್ಟು, ಆಕೆಗೆ ಅವ್ಯಾಚ್ಯ ಶಬ್ದಗಳಿಂದ ಬೈದು ಆಕೆಗೆ ದೈಹಿಕ ಮತ್ತು ಮಾನಸಿಕ ಕಿರುಕುಳ ನೀಡುವ ಮೂಲಕ ಭಾರತೀಯ ದಂಡ ಸಂಹಿತೆ ಕಲಂ.498-A ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ಎರಡನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಆರೋಪಿಯಾದ ನೀವು ಚಾಸಾ-1 ರವರನ್ನು ಉದ್ದೇಶಿಸಿ, "ಕತ್ತೆ ಮುಂಡೆ, ಲೋಫರ್ ಮುಂಡೆ, ಬಡ್ಡಿ, ಗುಡ್ ಶೆಟ್ಟಿ" ಎಂಬ ಅವಾಚ್ಯ ಶಬ್ದಗಳಿಂದ ಬೈದು ಸಾರ್ವಜನಿಕ ಶಾಂತಿ ಭಂಗಪಡಿಸುವ ಮೂಲಕ ಭಾರತೀಯ ದಂಡ ಸಂಹಿತೆ ಕಲಂ.504 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ಮೂರನೇಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಆರೋಪಿತರಾದ ನೀವು ಚಾಸಾ-1 ರವರ ಬಟ್ಟೆಗಳನ್ನು ಸುಟ್ಟು ಹಾಕಿ ರೂ.3,000/-ರಷ್ಟು ನಷ್ಟ ಉಂಟು ಮಾಡುವ ಮೂಲಕ ಭಾರತೀಯ ದಂಡ ಸಂಹಿತೆ ಕಲಂ.427 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ನಾಲ್ಕನೇಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಆರೋಪಿತರಾದ ನೀವು ಕೈಯಿಂದ ಚಾಸಾ-1 ರವರಿಗೆ ಹೊಡೆದು ಅವರಿಗೆ ಸಾದಾ ಸ್ವರೂಪದ ನೋವುಂಟು ಮಾಡುವ ಮೂಲಕ ಭಾರತೀಯ ದಂಡ ಸಂಹಿತೆ ಕಲಂ.323 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ನಾನು ಈ ಮೇಲಿನ ದೋಷಾರೋಪಣೆಗಳ ಮೇಲೆ ಈ ನ್ಯಾಯಾಲಯದ ವಿಚಾರಣೆಗೆ ನೀವು ಗುರಿಯಾಗಬೇಕೆಂದು ನಿರ್ದೇಶಿಸುತ್ತೇನೆ.

ದಿನಾಂಕಃ 08.02.2024

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ತಿ. ನರಸೀಪುರ.

ಹಿರಿಯ ಸಿವಿಲ್ ನ್ಯಾಯಾಧೀಶರ ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ,
ತಿ ನರಸೀಪುರ

**ಸಿ ಸಿ ಸಂಖ್ಯೆ ಃ *201/2021***

**ದೋಷಾರೋಪಣೆ**

ನವೀನ ಉಃ ಚಿಕ್ಕಣ್ಣ ಬಿನ್ ಅಮ್ಯಾಸೆ ಮಾದಯ್ಯ
27 ವರ್ಷ, ವಾಸಃ ಹಳೇ ಕೆಂಪಯ್ಯನಹುಂಡಿ,
ತಿ ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ.

ಪ್ರಶ್ನೆಃ ನಿಮ್ಮ ಮೇಲೆ ಹೊರಿಸಲಾದ ದೋಷಾರೋಪಣೆ ಕೇಳಿದ್ದೀರಾ? ಅದು ನಿಮಗೆ ತಿಳಿಯಿತೇ?

ಉತ್ತರಃ ಹೌದು

ಪ್ರಶ್ನೆಃ ನೀವು ಸದರಿ ದೋಷಾರೋಪವನ್ನು ಒಪ್ಪಿಕೊಳ್ಳುತೀರಾ? ಅಥವಾ ನಿಮ್ಮ ವಿರುದ್ಧ ವಿಚಾರಣೆ ನಡೆಯಬೇಕೇ?

ಉತ್ತರಃ ಇಲ್ಲಾ ವಿಚಾರಣೆಯಾಗಬೇಕು.

(ಮೇಲಿನ ದೋಷಾರೋಪಣೆಯನ್ನು ಆಪಾದಿತರಿಗೆ ತಿಳಿದಿರುವ ಭಾಷೆಯಲ್ಲಿ ಓದಿ, ತಿಳಿಸಿ ಹೇಳಿ ಅವರು ನೀಡಿದ ಉತ್ತರವನ್ನು ಬರೆದುಕೊಂಡಿರುವುದಾಗಿ ಈ ಮೂಲಕ ದೃಢೀಕರಿಸಲಾಗಿದೆ.)

ದಿನಾಂಕಃ 08.02.2024.

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಟಿ ನರಸೀಪುರ.